ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 8-3-2017

## ಪತ್ರಿಕಾ ಆಮಂತ್ರಣ

## 1. Obituarial Reference:

**sad demise of Justice N.D. Venkatesh**
**former Judge, High Court of Karnataka**

**Date: 9-3-2017 Thursday Time: 10-30 a.m.**
**Venue: Court Hall No. 1, Principal Bench of the High Court of Karnataka**

## ಪತ್ರಿಕಾ ಪ್ರಕಟಣೆ

## ವಾರ್ತಾ ಇಲಾಖೆಯಲ್ಲಿ ಮಹಿಳಾ ದಿನಾಚರಣೆ

ಬೆಂಗಳೂರು, ಮಾರ್ಚ್ 8, (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಛೇರಿಯಲ್ಲಿಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಪುರುಷ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಮಹಿಳೆಯರನ್ನು ಗೌರವಿಸುವ ಪ್ರಮಾಣವಚನ ಬೋಧಿಸುವ ಮೂಲಕ ವಿಶೇಷವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು ಅತ್ಯಂತ ಹೆಚ್ಚು ಮಹಿಳೆಯರನ್ನು ಹೊಂದಿರುವ ಇಲಾಖೆ ನಮ್ಮದು. ಮಹಿಳೆಯರನ್ನು ಗೌರವಿಸಬೇಕು ಎಂದು ಹೇಳಿ, "ನಾವು

ಮಹಿಳೆಯರನ್ನು ಮನ:ಪೂರ್ವಕವಾಗಿ ಗೌರವಿಸುತ್ತೇವೆ. ಅವರ ಬಗ್ಗೆ ಹಗುರವಾಗಿ ಮಾತನಾಡುವುದಿಲ್ಲ. ನಮ್ಮ ಬದುಕಿನಲ್ಲಿ ಅವರ ಕೊಡುಗೆ ಅಪಾರ. ನಮ್ಮ ಬದುಕಿನದ್ದಕ್ಕೂ ನಾವು ಅವರಿಗೆ ಋಣಿಯಾಗಿರುತ್ತೇವೆ" ಎಂದು ಪ್ರಮಾಣವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಇಲಾಖೆಯ ಉಪ ನಿರ್ದೇಶಕ ಎ.ಆರ್. ಪ್ರಕಾಶ್ ಅವರು ಮಾತನಾಡಿ ತಮ್ಮ ಮಕ್ಕಳ ಹೆಸರಿನ ಜೊತೆಗೆ ತಾಯಿಯ ಹೆಸರನ್ನು ಸೇರಿಸುವ ಮೂಲಕ ಮಹಿಳೆಯರಿಗೆ ಗೌರವ ನೀಡಬೇಕಾಗಿದೆ. ಪುರುಷ ಪ್ರದಾನ ಸಮಾಜದಲ್ಲಿ ಕೇವಲ ಮಹಿಳೆಯರೇ ಸಂತಾನಹರಣ ಶಸ್ತ್ರಚಿಕಿತ್ಸೆಯನ್ನು ಮಾಡಿಸಿಕೊಳ್ಳುತ್ತಿರುವುದು ವಿಪರ್ಯಾಸ. ಪುರುಷರು ಏಕೆ ಸಂತಾನಹರಣ ಶಸ್ತ್ರಚಿಕಿತ್ಸೆಯನ್ನು ಮಾಡಿಸಿಕೊಳ್ಳುವುದರ ಮೂಲಕ ಮಹಿಳೆಯರಿಗೆ ಗೌರವ ಸಲ್ಲಿಸುವಂತ ಕಾರ್ಯಗಳು ನಡೆಯಬೇಕು ಎಂದು ಹೇಳಿದರು.

ಇಲಾಖೆಯ ಉಪ ನಿರ್ದೇಶಕ ಹೆಚ್.ಬಿ. ದಿನೇಶ್ ಅವರು ಮಾತನಾಡಿ ಪುರುಷರಷ್ಟೇ ಮಹಿಳೆಯರೂ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಮಹಿಳೆಯರಿಗೆ ಬೇಕಾಗುವ ಅಗತ್ಯ ಸೌಲಭ್ಯಗಳನ್ನು ನೀಡಲು ಇಲಾಖೆ ಸದಾ ಸಿದ್ದವಾಗಿದೆ ಎಂದು ಹೇಳಿದರು.

ಈ ಸಂದರ್ಭಲ್ಲಿ ಇಲಾಖೆಯ ನಿರ್ದೇಶಕರು ಎಲ್ಲಾ ಮಹಿಳಾ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಹೂಗುಚ್ಛ ನೀಡುವುದರ ಮೂಲಕ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಇಲಾಖೆಯ ಉಪ ನಿರ್ದೇಶಕ ಬಸವರಾಜ ಕಂಬಿ, ದೇವರಾಜಯ್ಯ ಮತ್ತಿತರ ಹಿರಿಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

ಪೂರ್ಣಿಮ/ಜೆಡಿ/ಕೆಎಂ

## ಮಹಿಳೆಯರಿಗೆ ಪುರುಷರಷ್ಟೇ ಸಮಾನ ಅವಕಾಶ ಸಿಗಬೇಕು – ಮುಖ್ಯಮಂತ್ರಿ

ಬೆಂಗಳೂರು, ಮಾರ್ಚ್ 8 , (ಕರ್ನಾಟಕ ವಾರ್ತೆ)

ಲೋಕಸಭೆ ಮತ್ತು ವಿಧಾನಸಭೆಯಲ್ಲಿ ಶೇ. 33 ರಷ್ಟು ಮೀಸಲಾತಿ, ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳಲ್ಲಿ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಶೇ 50 ರಷ್ಟು ಮೀಸಲಾತಿಯನ್ನು ಮಹಿಳೆಯರಿಗೆ ನೀಡಲಾಗಿದೆ. ಮಹಿಳೆಯರಿಗೆ ಸಮಾನವಾದ ಅವಕಾಶ ಸಿಕ್ಕಿದಾಗ ಮಾತ್ರ ನಾಡಿನ, ದೇಶದ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು , ಅಂದು ಬೇರೆ ಬೇರೆ ಸಮುದಾಯದ ಜನರು ಶೋಷಣೆ ಅನುಭವಿಸಿದ ರೀತಿಯಲ್ಲೇ ಮಹಿಳೆಯರು ಕೂಡಾ ಶೋಷಣೆಗೆ ಒಳಗಾಗುತ್ತಿದ್ದಾರೆ ಎಂದು ಸಮಾಜವಾದಿ, ದೇಶಕಂಡ ಶ್ರೇಷ್ಠ ರಾಜಕಾರಣಿ ಲೋಹಿಯಾ ಅವರು ಹೇಳುತ್ತಿದ್ದರು ಎಂದು ಸಮಾರಂಭದಲ್ಲಿ ನೆನಪಿಸಿಕೊಂಡರು.

ಈ ವರ್ಷದ ಘೋಷ ವಾಕ್ಯ "ಮಹಿಳೆಯರು ಬದಲಾವಣೆಯತ್ತ ಧೈರ್ಯದಿಂದ ಮುನ್ನುಗಿ" ಎಂಬುದು. ನಮ್ಮ ರಾಜ್ಯದಲ್ಲಿ ಬಹಳಷ್ಟು ಮಹಿಳೆಯರು ಶ್ರೇಷ್ಠ ಕೈಗಾರಿಕೋದ್ಯಮಿಗಳಾಗಿ ಹೊರಹೊಮ್ಮಿದ್ದಾರೆ ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ ಅವರಿಗೆಲ್ಲ ನನ್ನ ಧನ್ಯವಾದಗಳು ಎಂದರು.

ದೇಶಕ್ಕೆ ಸ್ವಾತಂತ್ರ್ಯ ಬಂದು ಸುಮಾರು 70 ವರ್ಷವಾದರೂ ಸಮಾಜದಲ್ಲಿ ಲಿಂಗ ತಾರತಮ್ಯವಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕಾದರೆ ಮಹಿಳೆಯರಿಗೆ ಹೆಚ್ಚು ಅವಕಾಶ ನೀಡಬೇಕು. ನಮ್ಮ ಸರ್ಕಾರ ಕೈಗಾರಿಕಾ ನೀತಿ ಹೊಸ ಯೋಜನೆಯನ್ನು ತಂದಿದ್ದು ಮಹಿಳಾ ಕೈಗಾರಿಕೋದ್ಯಮಿಗಳಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗಿದೆ. ದೇಶದಲ್ಲಿಯೇ ನಮ್ಮ ರಾಜ್ಯದ ಕೈಗಾರಿಕಾ ನೀತಿಯು ಉತ್ತಮವಾಗಿದೆ ಎಂದು ಅವರು ತಿಳಿಸಿದರು.

ಈ ಸಮಾರಂಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಕರ್ಯ ಸಚಿವ ಆರ್.ವಿ. ದೇಶಪಾಂಡೆ, ಸರ್ಕಾರದ ಅಪರ ಮುಖ್ಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ರತ್ನಪ್ರಭಾ ಸೇರಿದಂತೆ ಅನೇಕ ಮಹಿಳಾ ಕೈಗಾರಿಕೋದ್ಯಮಿಗಳು ಉಪಸ್ಥಿತರಿದ್ದರು.

ಎಂಅರ್ಎಂ:ಕೆಎನ್ವಿ:ಜಿಪಿಆರ್.

## <u>ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಆಹ್ವಾನ</u>

**ಬೆಂಗಳೂರು, ಮಾರ್ಚ್ 8 , (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ 2016 ನೇ ಸಾಲಿನ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಹಾಗೂ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದೆ.

ಪತ್ರಿಕೋದ್ಯಮ ಕ್ಷೇತ್ರದ ವಿವಿಧ ರಂಗಗಳಲ್ಲಿ ಅನುಪಮ ಸೇವೆ ಸಲ್ಲಿಸಿದ ಸಾಧಕರಿಗೆ ಕರ್ನಾಟಕ ರಾಜ್ಯ ಸರ್ಕಾರ ಟೀಯೆಸ್ಸಾರ್, ಮೊಹರೆ ಹಣಮಂತರಾಯ, ಪರಿಸರ ಪತ್ರಿಕೋದ್ಯಮ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ.

ಟೀಯೆಸ್ಸಾರ್ ಪ್ರಶಸ್ತಿ:

ಕನ್ನಡ ಪತ್ರಿಕೋದ್ಯಮದಲ್ಲಿ "ಛೂ ಬಾಣ" ದ ಮೂಲಕ ರಾಜಕಾರಣದ ಓರೆ ಕೋರೆಗಳಿಗೆ ಹೊಸ ರೂಪವನ್ನು ನೀಡಿದ ಹಿರಿಯ ಪತ್ರಕರ್ತ ದಿ: ಟಿ.ಎಸ್. ರಾಮಚಂದ್ರರಾವ್ ಅವರು ತಮ್ಮ ಮೊನಚು ಬರಹಗಳಿಂದಲೇ ಓದುಗರ ಹೃದಯವನ್ನು ಗೆದ್ದವರು.

ಕನ್ನಡ ಪತ್ರಿಕೋದ್ಯಮದಲ್ಲಿ ಅನುಪಮ ಸೇವೆ ಸಲ್ಲಿಸುವ ಪತ್ರಕರ್ತರಿಗೆ ಟೀಯೆಸ್ಸಾರ್ ನೆನಪಿನಲ್ಲಿ ಕರ್ನಾಟಕ ಸರ್ಕಾರ 1993 ರಿಂದ ಪ್ರತಿ ವರ್ಷ "ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ" ನೀಡುತ್ತಿದೆ.

ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರಬೇಕು.

ಈ ವಾರ್ಷಿಕ ಪ್ರಶಸ್ತಿಯನ್ನು ಕೇವಲ ಒಬ್ಬ ವ್ಯಕ್ತಿಗೆ ಮಾತ್ರ ನೀಡಲಾಗುತ್ತದೆ. ಪ್ರಶಸ್ತಿಯ ಮೊತ್ತ 1 ಲಕ್ಷ ರೂ. ಆಗಿದ್ದು, ಪ್ರಶಸ್ತಿ ಪತ್ರ, ಫಲಕ ಒಳಗೊಂಡಿರುತ್ತದೆ.

ಪತ್ರಕರ್ತರ ಸಂಘಗಳು, ಸಾರ್ವಜನಿಕರು ಹಾಗೂ ಇತರ ಮೂಲಗಳಿಂದ ಟೀಯೆಸ್ಸಾರ್ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಬಹುದಾಗಿದೆ.

ಮೊಹರೆ ಹಣಮಂತರಾಯ ಪ್ರಶಸ್ತಿ:

ಕನ್ನಡ ಪತ್ರಿಕಾ ರಂಗದ ಭೀಷ್ಮ ಎಂದೇ ಹೆಸರಾದ ಮೊಹರೆ ಹಣಮಂತರಾಯರ ಹೆಸರಿನಲ್ಲಿ ಕರ್ನಾಟಕ ಸರ್ಕಾರವು 2010 ರಿಂದ ನೀಡುತ್ತಾ ಬಂದಿರುವ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ 1.00 ಲಕ್ಷ ರೂ. ಜೊತೆಗೆ ಪ್ರಶಸ್ತಿ ಪತ್ರ, ಫಲಕ ಒಳಗೊಂಡಿದೆ.

ಈ ವಾರ್ಷಿಕ ಪ್ರಶಸ್ತಿಯನ್ನು ಕೇವಲ ಒಬ್ಬ ವ್ಯಕ್ತಿಗೆ ಮಾತ್ರ ನೀಡಲಾಗುತ್ತಿದ್ದು ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಒಟ್ಟಿಗೆ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು ಹಾಗೂ ಕನ್ನಡ ಪತ್ರಿಕೋದ್ಯಮ ಕ್ಷೇತ್ರ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರಬೇಕು. ಪತ್ರಕರ್ತರ ಸಂಘಗಳು, ಸಾರ್ವಜನಿಕರು ಹಾಗೂ ಇತರ ಮೂಲಗಳಿಂದ ಮೊಹರೆ ಹಣಮಂತರಾಯ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಬಹುದಾಗಿದೆ.

ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳು:

ರಾಜ್ಯದೆಲ್ಲೆಡೆ ಅಭಿವೃದ್ಧಿಗೆ ಉತ್ತಮ ವಾತಾವರಣ ಕಲ್ಪಿಸಲು ಅನುಕೂಲವಾಗುವಂತೆ ಉತ್ತೇಜಿಸಲು ಅಭಿವೃದ್ಧಿ ಪತ್ರಿಕೋದ್ಯಮ ಹಾಗೂ ರಾಜ್ಯದಲ್ಲಿನ ಪರಿಸರ, ಪ್ರಕೃತಿ ಹಾಗೂ ನಿಸರ್ಗದ ಸಮತೋಲನ ಕಾಯ್ದುಕೊಳ್ಳಲು ನೆರವಾಗಿರುವ ಪತ್ರಕರ್ತರಿಗಾಗಿ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಸ್ಥಾಪಿಸಲಾಗಿದೆ.

ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸುವವರು ಮುದ್ರಣ ಮಾಧ್ಯಮ ಅಥವಾ ವಿದ್ಯುನ್ಮಾನ ಮಾಧ್ಯಮ ಕ್ಷೇತ್ರಗಳಲ್ಲಿ ಕನಿಷ್ಠ 10 ವರ್ಷ ಅನುಭವ ಹೊಂದಿರುವ ಪತ್ರಕರ್ತರು ಅರ್ಹರಾಗಿರುತ್ತಾರೆ. ಪ್ರಶಸ್ತಿ ತಲಾ 50,000/- ರೂ. ಪ್ರಶಸ್ತಿ ಪತ್ರ, ಫಲಕ ಒಳಗೊಂಡಿರುತ್ತದೆ.

ಈ ಪ್ರಶಸ್ತಿಗಳಿಗೆ ಪತ್ರಿಕಾ ಸಂಘಟನೆಗಳು ಮತ್ತು ಸಂಘ ಸಂಸ್ಥೆಗಳು ನಾಮ ನಿರ್ದೇಶನಗಳನ್ನು ಮಾಡಬಹುದು. ಅಲ್ಲದೆ ಅಭ್ಯರ್ಥಿಗಳೇ ನೇರವಾಗಿ ಅರ್ಜಿಸಲ್ಲಿಸಲು ಅವಕಾಶವಿದೆ. ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಸೌಧ, ನಂ. 17, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು – 560 001 ಇಲ್ಲಿಗೆ ಮಾರ್ಚ್ 25 ರೊಳಗಾಗಿ ಕಳುಹಿಸಿಕೊಡಬಹುದಾಗಿದೆ.

ಕೆಎನ್‌ಕೆ::ಜಿಪಿಆರ್.

# ಎಲ್ಲಾ ರಂಗಗಳಲ್ಲೂ ಮಹಿಳೆಯರಿಗೆ ಅವಕಾಶ, ಸವಲತ್ತು ನೀಡಲು ಸರ್ಕಾರ ಬದ್ಧ – ಮುಖ್ಯಮಂತ್ರಿ

ಬೆಂಗಳೂರು, ಮಾರ್ಚ್ 8 , (ಕರ್ನಾಟಕ ವಾರ್ತೆ)

ಎಲ್ಲಾ ರಂಗಗಳಲ್ಲೂ ಮಹಿಳೆಯರಿಗೆ ಅವಕಾಶ, ಸವಲತ್ತು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

1901 ರಲ್ಲಿ ಅಮೇರಿಕಾದಲ್ಲಿ ಮೊದಲ ಮಹಿಳಾ ದಿನಾಚರಣೆ ನಡೆದಿತ್ತು. 2011 ರ ಜನಗಣತಿಯ ಪ್ರಕಾರ 1000 ಪುರುಷರಿಗೆ 973 ಮಹಿಳೆಯರಿದ್ದಾರೆ. ನಾವು ಹೆಣ್ಣು ಭ್ರೂಣಹತ್ಯೆಯನ್ನು ನಿಲ್ಲಿಸಬೇಕು. ಮಹಿಳೆಯರಿಗೆ ಪುರುಷರಂತೆ ಸಮಾನ ಅವಕಾಶ ಸಿಗಬೇಕು. ಕೆಲವರಿಗೆ ಪ್ರತಿಭೆ, ವಿದ್ಯೆಯಿದ್ದರೂ ಅವಕಾಶ ವಂಚಿತರಾಗಿದ್ದಾರೆ. ಎಸ್.ಎಸ್.ಎಲ್.ಸಿ.,

ಪಿ.ಯು.ಸಿ. ಪರೀಕ್ಷೆಗಳಲ್ಲೂ ಮಹಿಳೆಯರು ಮೇಲುಗೈ ಸಾಧಿಸಿದ್ದಾರೆ. ಸಮಾಜದಲ್ಲಿ ಲಿಂಗ ತಾರತಮ್ಯ, ಹೆಣ್ಣು ಭ್ರೂಣಹತ್ಯೆ ಮಹಿಳಾ ದೌರ್ಜನ್ಯವನ್ನು ಹೋಗಲಾಡಿಸುವಲ್ಲಿ ನಾವು ಪ್ರಯತ್ನಿಸಬೇಕು. ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರಿಗೆ ಅವಕಾಶಗಳು ಸಿಗಬೇಕು. ದೇಶ ಸ್ವಾತಂತ್ರ್ಯ ದೊರೆತು 70 ವರ್ಷಗಳಾದರೂ ಸಹ ಅಸಮಾನತೆ ಮುಂದುವರೆದಿದೆ. ಸ್ವಾಮಿ ವಿವೇಕಾನಂದರು ಮಹಿಳೆಯರ ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದರು. ಈಗಲೂ ಮಹಿಳೆಯರು ಬಸ್ ಚಾಲಕಿ, ಗಗನಸಖಿ ಹೀಗೆ ಹಲವು ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಸರ್ಕಾರವು ಕಳೆದ 4 ವರ್ಷಗಳಿಂದ ಮಹಿಳೆಯರ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಸಮೃದ್ಧಿ ಯೋಜನೆಯಡಿ ಸ್ವಂತ ವೃತ್ತಿ ಆರಂಭಿಸುವ ಮಹಿಳೆಯರಿಗೆ 10 ಸಾವಿರ ಸಬ್ಸಿಡಿ, 40 ಸಾವಿರ ಸಾಲದ ರೂಪದಲ್ಲಿ ನೀಡಲಾಗುತ್ತದೆ. ಸರ್ಕಾರ ಇದಕ್ಕೆ 10 ಕೋಟಿ ಮೀಸಲಿಟ್ಟಿದೆ.

ರಾಜ್ಯದಲ್ಲಿ ಒಂದೂವರೆ ಲಕ್ಷ ಮಹಿಳಾ ಸ್ವಯಂಸೇವಾ ಸಂಘಗಳಿದ್ದು, 22 ಲಕ್ಷ ಸದಸ್ಯರಿದ್ದಾರೆ. ಅವರಿಗೆ ಸುತ್ತು ನಿಧಿಯ ಮೊತ್ತವನ್ನು 5000 ದಿಂದ 25,000 ರೂ. ಗಳಿಗೆ ಹೆಚ್ಚಿಸಲಾಗಿದೆ. ಅಂತರ್ಜಾತಿಯ ವಿವಾಹಕ್ಕೆ 50,000 ರೂ. ಗಳ ಪ್ರೋತ್ಸಾಹ ಧನ ನೀಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಿ ಮಾತನಾಡಿದ ಸಚಿವೆ ಉಮಾಶ್ರೀ ಇಲಾಖೆ ವತಿಯಿಂದ ಮಹಿಳೆಯರ ಸಬಲೀಕರಣ ಹತ್ತು ಹಲವು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಮಹಿಳೆಯರಿಗೆ ಬಡ್ಡಿರಹಿತ ಸಾಲ, ಮಂಗಳಮುಖಿಯರ ಏಳ್ಗೆ, ಆಸಿಡ್ ಸಂತ್ರಸ್ತರಿಗೆ ಸಹಾಯಧನ ಹಾಗೂ 3000 ರೂ.ಗಳ ಮಾಸಾಶನ, ಧನಶ್ರೀ ಯೋಜನೆಯಡಿ ಎಚ್.ಐ.ವಿ. ಸಂತ್ರಸ್ಥರಿಗೆ ಸಹಾಯಧನ ಸಮೃದ್ಧಿ ಯೋಜನೆಯಡಿ ಸ್ವಂತ ಉದ್ಯೋಗ ನಡೆಸುವವರಿಗೆ 10,000 ರೂ.ಗಳ ಸಹಾಯಧನ ಹೀಗೆ ಮಹಿಳೆಯರ ಏಳ್ಗೆಗೆ ಇಲಾಖೆ ಶ್ರಮಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯರು ಹಾಗೂ ಮಹಿಳಾ ಮತ್ತು ಮಕ್ಕಳ ಶೋಷಣೆ, ದೌರ್ಜನ್ಯ ಅತ್ಯಾಚಾರ ತಡೆ ಹಾಗೂ ವರದಿ ನೀಡುವ ತಜ್ಞರ ಸಮಿತಿ ಅಧ್ಯಕ್ಷರಾದ ವಿ. ಎಸ್. ಉಗ್ರಪ್ಪ ಮಾತನಾಡಿ ಮಹಿಳೆಯರಿಗೆ ಸಮಾಜದಲ್ಲಿ ಸಮಾನ ಅವಕಾಶಗಳು ಸಿಗಬೇಕು. ಸಂವಿಧಾನದಲ್ಲಿ ಸಹ ಲಿಂಗತಾರತಮ್ಯ ಮಾಡಬಾರದೆಂಬ ಉಲ್ಲೇಖವಿದೆ. ಮಹಿಳೆಯರ ಮೇಲಿನ ಶೋಷಣೆ, ದೌರ್ಜನ್ಯ ಅತ್ಯಾಚಾರಗಳು ನಿಲ್ಲುವವರೆಗೂ ಉತ್ತಮ ಸಮಾಜದ ನಿರ್ಮಾಣ ಸಾಧ್ಯವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀಬಾಯಿ, ಮಹಿಳೆಯರು ದಿಟ್ಟ ನಿಲುವನ್ನು ಹೊಂದಿ, ಧೈರ್ಯವಂತರಾಗಬೇಕು. ವರದಕ್ಷಿಣೆ, ಭ್ರೂಣಹತ್ಯೆ, ಲಿಂಗತಾರತಮ್ಯಗಳಿಂದ ಮಹಿಳೆಯರ ನೈತಿಕ ಮೌಲ್ಯ ಕುಸಿಯುತ್ತವೆ. ಕಲಬುರಗಿಯಲ್ಲಿ ಸುಮಾರು 2200 ಮಹಿಳೆಯರ ಗರ್ಭಕೋಶ ಕಸಿ ನಡೆಸಲಾಗಿದ್ದು, ಅವರ ಸ್ಥಿತಿ ಶೋಚನೀಯವಾಗಿದ್ದು, ಅವರಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಡಬೇಕೆಂದು ಸಚಿವರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಹಿಳೆಯರ ಪರ ಶ್ರಮಿಸಿದ 5 ಸಂಸ್ಥೆಗಳಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ, ಅತ್ಯುತಮ್ಮ ಸ್ತ್ರೀಜಾಗೃತಿ ಮೂಡಿಸಿದ ಮಹಿಳೆಯರಿಗೆ, ಅತ್ಯುತ್ತಮ ಸ್ತ್ರೀಶಕ್ತಿ ಸಂಘಗಳಿಗೆ, ತಾಲ್ಲೂಕು ಮಟ್ಟದ ಸಂಸ್ಥೆಗಳಿಗೆ, ಅಂತರರಾಷ್ಟ್ರೀಯ ಈಜುಪಟು ರೇವತಿ ನಾಯಕ್ ಅವರಿಗೆ, ಬಳ್ಳಾರಿಯಲ್ಲಿ ಮಹಿಳೆಯರ ಕಳ್ಳಸಾಗಣೆ ನಿಗ್ರಹ ಮಾಡಿದ 43 ಸಂತ್ರಸ್ತರನ್ನು ಕಾಪಾಡಿದ ಪೋಲೀಸ್ ಅಧಿಕಾರಿಗಳ ಹಾಗೂ ಸಿಬ್ಬಂದಿಗಳಿಗೆ ಈ ಸಂದರ್ಭದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ. ಜೆ. ಜಾರ್ಜ್, ನಾಮ ನಿರ್ದೇಶಿತ ವಿಧಾನಸಭಾ ಸದಸ್ಯರಾದ ವಿನಿಶಾ ನಿರೋ, ಜವಾಹರ ಬಾಲಭವನದ ಅಧ್ಯಕ್ಷರಾದ ಡಾ. ಅಂಜಲಿ ನಿಂಬಾಳ್ಕರ್, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಭಾರತಿ ಶಂಕರ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಅಧ್ಯಕ್ಷರಾದ ಡಾ. ಕೃಪಾ ಅಮರ್ ಆಳ್ವಾ, ಕಂಠೀರವ ಸ್ಟುಡಿಯೋ ಅಧ್ಯಕ್ಷರಾದ ಅಶ್ವಿನಿ ಕೃಷ್ಣಮೂರ್ತಿ, ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕಮಲಮ್ಮ. ವಿಧಾನ ಪರಿಷತ್ ಸದಸ್ಯರಾದ ವೀಣಾ ಅಚ್ಚಯ್ಯ, ಅನಿವಾಸಿ ಭಾರತೀಯ ಒಕ್ಕೂಟದ ಅಧ್ಯಕ್ಷರಾದ ಡಾ. ಆರತಿ ಕೃಷ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಉಮಾ ಮಹಾದೇವನ್, ನಿರ್ದೇಶಕರಾದ ದೀಪ ಎಂ ಹಾಗೂ ಇತರರು ಉಪಸ್ಥಿತರಿದ್ದರು.

ಎಂಆರ್‌ಎಂ:ಕೆಎನ್‌ಕೆ:ಜಿಪಿಆರ್

## ನಾಳೆಯಿಂದ ಆರಂಭವಾಗಲಿರುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಲಾಗಿದೆ- ತನ್ವೀರ್‌ಸೇಠ್

ಬೆಂಗಳೂರು, ಮಾರ್ಚ್ 8, (ಕರ್ನಾಟಕ ವಾರ್ತೆ)

ನಾಳೆಯಿಂದ ಆರಂಭವಾಗಲಿರುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳು ಸುಗಮವಾಗಿ ನಡೆಯಲಿದ್ದು ಯಾವುದೇ ರೀತಿಯ ಅಕ್ರಮಗಳು ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ತನ್ವೀರ್ ಸೇಠ್ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಇಂದು ಮಾತನಾಡಿದ ಸಚಿವರು ಈಗಾಗಲೇ ನಿಗದಿಪಡಿಸಿರುವಂತೆಯೇ ಪರೀಕ್ಷೆಗಳು ಹಾಗೂ ಮೌಲ್ಯಮಾಪನ ಕಾರ್ಯಗಳು ನಡೆಯಲಿವೆ ಈ ಕರ್ತವ್ಯಕ್ಕೆ ನಿಯೋಜಿಸಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಪರೀಕ್ಷೆ ಹಾಗೂ ಮೌಲ್ಯ ಮಾಪನ ಬಹಿಷ್ಕರಿಸುವಂತಹ ಚಟುವಟಿಕೆಗಳಲ್ಲಿ ತೊಡಗಿದ್ದಲ್ಲಿ ಅಂತಹವರ ವಿರುದ್ಧ ಕಠಿಣ ಕ್ರಮ ಜರುಗಿಸುವುದಾಗಿ ಸಚಿವರು ಪ್ರಕಟಿಸಿದರು.

ಇಂದು ತಮ್ಮನ್ನು ಭೇಟಿ ಮಾಡಿದ ಐದು ಬೋಧಕ ಸಿಬ್ಬಂದಿ ಸಂಘಗಳ ಪ್ರತಿನಿಧಿಗಳು ನಾಳೆಯಿಂದ ನಡೆಯುವ ಪರೀಕ್ಷೆಗಳು ಹಾಗೂ ಮೌಲ್ಯಮಾಪನಗಳನ್ನು ನಿಗದಿ ಅವಧಿಯೊಳಗೆ ಪೂರ್ಣಗೊಳಿಸುವುದಾಗಿ ತಿಳಿಸಿದ್ದು ಇದರಲ್ಲಿ ಸರ್ಕಾರಿ, ಖಾಸಗಿ ಹಾಗೂ ಅನುದಾನಿತ ಕಾಲೇಜುಗಳ ಸಂಘಟನೆಗಳ ಪ್ರತಿನಿಧಿಗಳು ಹಾಜರಿದ್ದರು ಎಂದು ಮಾತನಾಡಿದ ಸಚಿವರು ಈ ಬಾರಿಯ ಪರೀಕ್ಷೆಗಳು ಯಾವುದೇ ಗೊಂದಲಗಳಿಲ್ಲದೆ ನಡೆಯಲಿದೆ ಅಲ್ಲದೆ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗದಂತೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದರು.

ಏಳನೇ ವೇತನ ಆಯೋಗ ಮಾಡಲು ಸರ್ಕಾರ ನಿರ್ಧರಿಸಿದ್ದು, ಆ ಸಮಯದಲ್ಲಿ ಶಿಕ್ಷಕರು ಹಾಗೂ ಉಪನ್ಯಾಸಕರ ನಡುವಿನ ವೇತನ ತಾರತಮ್ಯ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳಲ್ಲಿದ್ದು ಈ ಸಂಬಂಧ ಮುಖ್ಯಮಂತ್ರಿ ಅವರೊಂದಿಗೆ ಮಾತುಕತೆ ನಡೆಸಲಾಗಿದೆ, ಶಿಕ್ಷಕರು ಹಾಗೂ ಉಪನ್ಯಾಸಕರ ಬೇಡಿಕೆಗಳನ್ನು ನಮ್ಮ ಸರ್ಕಾರ ಹಂತ ಹಂತವಾಗಿ ಈಡೇರಿಸಲಿದೆ, ಹಿಂದಿನ ಸರ್ಕಾರಗಳು ಶಿಕ್ಷಕರ ಸಮಸ್ಯೆಗಳನ್ನು ನಿವಾರಿಸಲು ಮುಂದಾಗದಿರುವುದೇ ಇಂದಿನ ಸಮಸ್ಯೆಗಳಿಗೆ ಕಾರಣ ಎಂದರು.

ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಜೊತೆ ಯಾರು ಚೆಲ್ಲಾಟ ಆಡಬಾರದು ಅದಕ್ಕೆ ನಮ್ಮ ಸರ್ಕಾರ ಅವಕಾಶ ನೀಡುವುದಿಲ್ಲ. ನಿಮ್ಮ ಸಮಸ್ಯೆ ಬಗೆಹರಿಸಲು ಸರ್ಕಾರ ಸಿದ್ಧವಿದೆ ಮೌಲ್ಯಮಾಪನ ಹಾಗೂ ಪರೀಕ್ಷೆಗಳನ್ನು ನಿಗದಿತ ಅವಧಿಯಲ್ಲಿ ಶಿಕ್ಷಕ ಸಮುದಾಯ ಸುಗಮವಾಗಿ ನಡೆಸಿಕೊಡಬೇಕು ಎಂದು ಮಾತನಾಡಿದ ಸಚಿವರು ಪೋಷಕರು ಮತ್ತು ವಿದ್ಯಾರ್ಥಿಗಳು ಈ ವಿಚಾರದಲ್ಲಿ ಆತಂಕಪಡುವ ಅಗತ್ಯವಿಲ್ಲ ಎಂದು ಮಾತನಾಡಿದರು.

ನಾಳೆಯಿಂದ ಆರಂಭವಾಗಲಿರುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ 6,84,449 ವಿದ್ಯಾರ್ಥಿಗಳು ಹಾಜರಾಗಲಿದ್ದು ಅದರಲ್ಲಿ 2,58,259 ವಿದ್ಯಾರ್ಥಿಗಳು 2,90,691 ವಿದ್ಯಾರ್ಥಿನಿಯರು ಹಾಗೂ 19 ಮಂದಿ ತೃತೀಯ ಲಿಂಗೀಯರು ಪರೀಕ್ಷೆ ಬರೆಯಲಿದ್ದಾರೆ ಎಂದ ಶಿಕ್ಷಣ ಸಚಿವರು ಈ ಸಂಬಂಧ ರಾಜ್ಯದಲ್ಲಿ 217ರ ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು ಅದರಲ್ಲಿ 1714 ಸಾಮಾನ್ಯ 309 ಸೂಕ್ಷ್ಮ 152 ಅತಿಸೂಕ್ಷ್ಮ ಪರೀಕ್ಷಾ ಕೇಂದ್ರಗಳೆಂದು ಗುರುತಿಸಲಾಗಿದ್ದು ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ವಿಚಕ್ಷಣಾದಳ ಹಾಗೂ ಸಂಚಾರಿ ವಿಚಕ್ಷಣಾದಳಗಳನ್ನು ರಚಿಸಲಾಗಿದೆ ಎಂದರು ತಿಳಿಸಿದರು.

ಪ್ರಶ್ನೆ ಪತ್ರಿಕೆಗಳನ್ನು ಆಯಾ ಜಿಲ್ಲಾ ಕೇಂದ್ರಗಳಿಗೆ ಕಳುಹಿಸುವ ಕಾರ್ಯ ಪೂರ್ಣಗೊಂಡಿದ್ದು ಅವರ ಮೇಲುಸ್ತುವಾರಿಯನ್ನು ಜಿಲ್ಲಾಡಳಿತಕ್ಕೆ ನೀಡಲಾಗಿದೆ ಅಲ್ಲದೆ ಪ್ರಶ್ನೆ ಪತ್ರಿಕೆ ಇರುವ ಕಡೆ ಬಯೋಮೆಟ್ರಿಕ್ ವ್ಯವಸ್ಥೆ, ಸಿ.ಸಿ. ಕ್ಯಾಮರಾ ಅಳವಡಿಕೆ ಮತ್ತು ವಿಡಿಯೋ ಚಿತ್ರೀಕರಣ ನಡೆಸಲಾಗುವುದು ಎಂದು ಮಾತನಾಡಿದ ಸಚಿವರು ಅದೇ ಕಾಲೇಜಿನಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ತಿಗಳು ತನ್ನದೇ ಆದ ಕಾಲೇಜಿನಲ್ಲಿ ಪರೀಕ್ಷೆ ಬರೆಯುವಂತಿಲ್ಲ ಅಲ್ಲದೆ ಆ ಕಾಲೇಜಿನ ಸಿಬ್ಬಂದಿಗಳನ್ನು ಬೇರೆ ಕಾಲೇಜಿಗೆ ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಲಾಗಿದೆ.

ಪರೀಕ್ಷೆ ನಡೆಯುವ ಕಾಲೇಜುಗಳ ಹತ್ತಿರ ಸುಮಾರು 200 ಮೀಟರ್ ವ್ಯಾಪ್ತಿಯಲ್ಲಿ ನಿಷೇದಾಜ್ಞೆ ಜಾರಿಗೊಳಿಸಲಾಗಿದ್ದು ಆ ವ್ಯಾಪ್ತಿಯಲ್ಲಿ ಹೆಚ್ಚಿನ ಬದಲಾವಣೆಗೆ ಅವಕಾಶ ಇರುವುದಿಲ್ಲ ಹಾಗೂ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಈಗಾಗಲೇ ಆದೇಶ ಹೊರಡಿಸಲಾಗಿದೆ ಎಂದು ಸಚಿವ ತನ್ವೀರ್ ಸೇಠ್ ಅವರು ತಿಳಿಸಿದರು.

ಎಂಆರ್‌ಎಂ/ಕೆಪಿಪಿ/ಕೆಎಂ

## ಕರ್ನಾಟಕ ಮುಕ್ತ ಶಾಲೆ ಪರೀಕ್ಷಾ ದಿನಾಂಕ ಪ್ರಕಟ

ಬೆಂಗಳೂರು, ಮಾರ್ಚ್ 8 , (ಕರ್ನಾಟಕ ವಾರ್ತೆ)

ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್. ಪರೀಕ್ಷೆ ಮಾರ್ಚ್ 30 ರಿಂದ ಏಪ್ರಿಲ್ 10 ರವರೆಗೆ ನಡೆಯಲಿದ್ದು ಪ್ರವೇಶ ಪತ್ರಗಳನ್ನು ರಾಜ್ಯದ ಎಲ್ಲಾ ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್. ಕಲಿಕಾ ಕೇಂದ್ರಗಳಿಗೆ ಜಿಲ್ಲಾ ಡಯಟ್ ಪ್ರಾಂಶುಪಾಲರ ಮುಖಾಂತರ ಈಗಾಗಲೇಕಳುಹಿಸಲಾಗಿದೆ.

ವಿದ್ಯಾರ್ಥಿಗಳು ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲಾ ಕಲಿಕಾ ಕೇಂದ್ರಗಳಿಂದ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳುವಂತೆ ನಿರ್ದೇಶಕರು, (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಜೆಡಿ:ಜಿಪಿಆರ್

# Trade Fair for Artisans and Women Entrepreneurs

Bangalore, March 8 (Karnataka Information)

On the occasion of International Women's day, on 11th and 12th of March, 2017 Saturday and Sunday at Swamy Vivekananda Road Metro Station, Old Madras Road, Indiranagar, Bangalore Laghu Udyog Bharati-Karnataka (LUB-K) jointly with Bangalore Metro Rail Corporation Limited (BMRCL) Bangalore Haat is organising Metro Bangalore Santhe (A trade Fair for Women Entrepreneurs and Artisans) showcasing Karnataka Women Artisans products cum live skill based workshops added with inspirational and motivational interactive discussions with Women Achievers. Entry Free for all which will help from the entrants to experienced entrepreneurs. For enquiries contact 9986707883/ 080 26651234/ 41716085 s